ವಿಷಯ : DEPARTMENT / SUBJECT: ಮುಖ್ಯಮಂತ್ರಿ

ಹೆಸರು : NAME OF THE NEWS PAPER: ವಿಜಯವಾಣಿ ದಿನಾಂಕ : DATE 30/3/21

# ರ್‍ಯಾಲಿ, ಪ್ರತಿಭಟನೆಗೆ ನಿರ್ಬಂಧ

## ದೊಡ್ಡ ಸಂಖ್ಯೆಯಲ್ಲಿ ಜನ ಸೇರಲು ಅವಕಾಶವೇ ಇಲ್ಲ | ಲಾಕ್‌ಡೌನ್, ರಾತ್ರಿ ಕರ್ಫ್ಯೂ ಭಯ ಬೇಡ ಎಂದ ಸಿಎಂ

## ಉಪಚುನಾವಣಾ ಕ್ಷೇತ್ರಗಳಲ್ಲಿ ನಿಯಂತ್ರಣ ಕ್ರಮಕ್ಕೆ ಇಂದು ಸೂಚನೆ | ಕಡ್ಡಾಯವಾಗಿ ಮಾಸ್ಕ್ ಧರಿಸಲು ಮನವಿ

ಬೆಂಗಳೂರು: ಕೊರೊನಾ ಕೇಸುಗಳ ಹೆಚ್ಚಳವಾಗುತ್ತಿರುವ ಹಿನ್ನೆಲೆಯಲ್ಲಿ ರಾಜ್ಯಾದ್ಯಂತ ಸೋಮವಾರದಿಂದಲೇ ಅನ್ವಯವಾಗುವಂತೆ 15ದಿನಗಳ ಕಾಲ ಪ್ರತಿಭಟನೆ, ಸತ್ಯಾಗ್ರಹ, ಧರಣಿ, ರ್‍ಯಾಲಿ ನಿಷೇಧಿಸಲಾಗಿದೆ. ಜತೆಗೆ, ಲಾಕ್‌ಡೌನ್ ಅಥವಾ ನೈಟ್ ಕರ್ಫ್ಯೂ ಜಾರಿಗೊಳಿಸುವ ಯಾವುದೇ ಇರಾದೆಯೂ ನಮ್ಮ ಮುಂದಿಲ್ಲ ಎಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ತಿಳಿಸಿದ್ದಾರೆ.

ಗೃಹ ಕಚೇರಿಯಲ್ಲಿ ಸೋಮವಾರ ಸಂಜೆ ಸಚಿವರು, ತಜ್ಞರು, ಹಿರಿಯ ಅಧಿಕಾರಿಗಳ ಜತೆಗೆ ಚರ್ಚಿಸಿದ ಬಳಿಕ ಸಿಎಂ ಮಹತ್ವದ ನಿರ್ಧಾರ ಪ್ರಕಟಿಸಿದರು.

ಬೆಂಗಳೂರು, ನಗರ, ಗ್ರಾಮಾಂತರ ಜಿಲ್ಲೆ ಸೇರಿದಂತೆ ನಾನಾ ಜಿಲ್ಲೆಗಳಲ್ಲಿ ಕೋವಿಡ್ ಪ್ರಕರಣ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಸಚಿವರು, ತಜ್ಞರು, ಹಿರಿಯ ಅಧಿಕಾರಿಗಳೊಂದಿಗೆ ಸುದೀರ್ಘವಾಗಿ ಚರ್ಚಿಸಲಾಗಿದೆ ಎಂದು ಹೇಳಿದರು. ಜತೆಗೆ, ಕೊರೊನಾ ನಿಯಂತ್ರಣದ ಬಗ್ಗೆ ವೈಜ್ಞಾನಿಕವಾಗಿ ನಿರ್ಧಾರ ತೆಗೆದುಕೊಳ್ಳುವಂತೆ ಸಿದ್ದರಾಮಯ್ಯ ಅವರು ಬರೆದಿದ್ದ ಪತ್ರದ ಬಗ್ಗೆಯೂ ಸಿಎಂ ಪತ್ರಿಕಾಗೋಷ್ಠಿಯಲ್ಲಿ ಉಲ್ಲೇಖಿಸಿದರು.

**ಉಪಚುನಾವಣೆ ಕ್ಷೇತ್ರಗಳಿಗೂ ಕಟ್ಟಪ್ಪಣೆ:** ಉಪಚುನಾವಣೆ ನಡೆಯಲಿರುವ ಕ್ಷೇತ್ರಗಳಲ್ಲಿ ಭಾರೀ ಸಂಖ್ಯೆಯಲ್ಲಿ ಸಾವಿರಾರು ಜನ ಒಂದೆಡೆ ಸೇರುತ್ತಿರುವ ಬಗ್ಗೆ ಪ್ರತಿಕ್ರಿಯಿಸಿದ ಯಡಿಯೂರಪ್ಪ, ದೊಡ್ಡ ಸಂಖ್ಯೆಯಲ್ಲಿ ಜನರ ಜಮಾವಣೆಗೆ ಅವಕಾಶ ನೀಡುವುದಿಲ್ಲ. ಮಂಗಳವಾರ ಈ ಸಂಬಂಧ ಕಟ್ಟುನಿಟ್ಟಿನ ಸೂಚನೆ ನೀಡುವುದಾಗಿ ತಿಳಿಸಿದರು.

ಸಾರ್ವಜನಿಕರು ಜಾಗೃತರಾಗಬೇಕು. ಪ್ರತಿಯೊಬ್ಬರೂ ಕಡ್ಡಾಯವಾಗಿ ಮಾಸ್ಕ್ ಧರಿಸಿ ಸಾಮಾಜಿಕ ಅಂತರ ಕಾಪಾಡುವ ಜತೆಗೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು. ಮಾಸ್ಕ್ ಧರಿಸದವರ ವಿರುದ್ಧ ಮಂಗಳವಾರದಿಂದ ಕಠಿಣ ಕ್ರಮ ಕೈಗೊಳ್ಳುವಂತೆ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಆದರೆ ದಂಡ



ಮುಖ್ಯಮಂತ್ರಿ ಯಡಿಯೂರಪ್ಪ ಬೆಂಗಳೂರಿನಲ್ಲಿ ಅಧಿಕಾರಿಗಳ ಜತೆಗೆ ಸಭೆ ನಡೆಸಿದರು.

### ಸಿಎಂ ಬಿಎಸ್‌ವೈ ಹೇಳಿದ್ದೇನು?

- ಯಾವುದೇ ರೀತಿಯ ಲಾಕ್‌ಡೌನ್, ರಾತ್ರಿ ಕರ್ಫ್ಯೂ ಇಲ್ಲ.
- 15 ದಿನಗಳ ಕಾಲ ರಾಜ್ಯದಲ್ಲಿ ಯಾವುದೇ ರೀತಿಯ ಸತ್ಯಾಗ್ರಹ, ಚಳವಳಿ, ರ್‍ಯಾಲಿ ನಡೆಸುವಂತಿಲ್ಲ.
- ಯಾವುದೇ ಕಾರಣಕ್ಕೂ ದೊಡ್ಡ ಸಂಖ್ಯೆಯಲ್ಲಿ ಜನ ಒಂದೆಡೆ ಸೇರಲು ಅವಕಾಶ ನೀಡುವುದಿಲ್ಲ.
- ಮದುವೆಗಳಲ್ಲಿ ನಿಯಮ ಪಾಲನೆಗೆ ಬಿಗಿ ಕ್ರಮ ಕೈಗೊಳ್ಳಲಾಗುವುದು.
- ಯಾವುದೇ ಸಮಾರಂಭಗಳಲ್ಲಿ 400-500 ಜನರಿಗಿಂತ [illegible]

ರಾಜ್ಯದ ಚಿತ್ರಮಂದಿರಗಳಲ್ಲಿ ಸಿನಿಮಾ ಪ್ರದರ್ಶನದ ಬಗ್ಗೆಯೂ ಸಭೆಯಲ್ಲಿ ಚರ್ಚೆಯಾಗಿದೆ. ಆದರೆ ಸದ್ಯ ಆ ಬಗ್ಗೆ ಯಾವುದೇ ನಿರ್ಧಾರವಾಗಿಲ್ಲ.

- ಆರ್. ಅಶೋಕ್, ಕಂದಾಯ ಸಚಿವ



ಮತ್ತೆ ಲಾಕ್ ಆದ್ರೆ ಲೋಕವೇ ಡೌನ್

ಲಾಕ್‌ಡೌನ್ ಬೇಡವೆಂದು ಉದಯವಾಣಿ ಮಾ. 29 ರಂದು ಪ್ರಕಟಿಸಿದ್ದ ವರದಿ.

## ಶಿಕ್ಷಣ ಸಂಸ್ಥೆ ಬಂದ್ ಇಲ್ಲ ಪರೀಕ್ಷೆ ಇಲ್ಲದೆ ಪಾಸ್ ಮಾಡಲ್ಲ

ಬೆಂಗಳೂರು: ಒಂದರಿಂದ 9ನೇ ತರಗತಿವರೆಗೆ ಪರೀಕ್ಷೆ ಇಲ್ಲದೇ ಉತ್ತೀರ್ಣ ಮಾಡಲಾಗುತ್ತದೆ ಎಂಬ ಸುದ್ದಿಯನ್ನು ಮುಖ್ಯಮಂತ್ರಿಗಳು ತಳ್ಳಿಹಾಕಿದ್ದಾರೆ.

ಪರೀಕ್ಷೆಯಿಲ್ಲದೇ ಪಾಸ್ ಮಾಡುವ ವಿಚಾರವಾಗಿ ಇಬ್ಬರು ಸಚಿವರು ನೀಡಿದ್ದ ವಿಭಿನ್ನ ಹೇಳಿಕೆಯಿಂದ ವಿದ್ಯಾರ್ಥಿಗಳು, ಪಾಲಕ, ಪೋಷಕರು ಹಾಗೂ ಶಿಕ್ಷಣ ಸಂಸ್ಥೆಗಳಲ್ಲಿ ಸಾಕಷ್ಟು ಗೊಂದಲ ಸೃಷ್ಟಿಯಾಗಿತ್ತು. ಸೋಮವಾರ ಸಿಎಂ ಬಿಎಸ್‌ವೈ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲೂ ಈ ವಿಚಾರದ ಬಗ್ಗೆ ಚರ್ಚೆಯಾಗಿದೆ. ಹಾಗೆಯೇ ಪರೀಕ್ಷೆ ನಡೆಸಲು ಅನುಮತಿ ನೀಡುವ ಜತೆಗೆ ಶಾಲಾ ಕಾಲೇಜುಗಳನ್ನು ಬಂದ್ ಮಾಡುವುದಿಲ್ಲ ಎಂಬ ಸ್ಪಷ್ಟ ಸಂದೇಶವನ್ನು ರವಾನಿಸಿದೆ.

ನಂತರ ಮಾತನಾಡಿದ ಸಿಎಂ ಯಡಿಯೂರಪ್ಪ 1ರಿಂದ 9ನೇ ತರಗತಿ ಮಕ್ಕಳನ್ನು ಪರೀಕ್ಷೆಯಿಲ್ಲದೇ ಪಾಸ್ ಮಾಡುವ ನಿರ್ಧಾರ ತೆಗೆದುಕೊಂಡಿಲ್ಲ. 15 ದಿನದೊಳಗೆ ಪರೀಕ್ಷೆಗಳು ಮುಗಿಯಲಿವೆ. ಶಾಲಾ ಕಾಲೇಜುಗಳನ್ನು ಮುಚ್ಚುವುದಿಲ್ಲ. ಶಾಲಾಕಾಲೇಜುಗಳಿಗೆ ವಿದ್ಯಾರ್ಥಿಗಳು ನಿರಂತರವಾಗಿ ಬರುತ್ತಿದ್ದಾರೆ. ಮಕ್ಕಳು ಮನೆಯಲ್ಲಿದ್ದರೆ ನಿಯಂತ್ರಣ ಮಾಡುವುದು ಕಷ್ಟ ಹೀಗಾಗಿ ಶಾಲೆಗಳು ನಿರಂತರವಾಗಿ ನಡೆಯಬೇಕು ಎಂದು ತಜ್ಞರು ಸೇರಿದಂತೆ ಹಿರಿಯರು ಸಲಹೆ ನೀಡಿದ್ದಾರೆ. ಹೀಗಾಗಿ ಶಿಕ್ಷಣ ಸಂಸ್ಥೆಗಳನ್ನು ಬಂದ್ ಮಾಡುವುದಿಲ್ಲ ಎಂದರು.

### 134 ಮಕ್ಕಳಿಗೆ ಸೋಂಕು

ಎರಡನೇ ಅಲೆ ಆತಂಕ ಆರಂಭವಾದ ನಂತರ ರಾಜ್ಯದಲ್ಲಿ 10 ವರ್ಷದೊಳಗಿನ 134 ಮಕ್ಕಳಿಗೆ ಕೊರೊನಾ ಸೋಂಕು ತಗುಲಿದೆ. ರಾಜ್ಯ ಸರ್ಕಾರದ ಕೊರೊನಾ ವಾರ್ ರೂಂ ದತ್ತಾಂಶ ಪ್ರಕಾರ ಮಾರ್ಚ್ 1 ರಿಂದ 28 ವರೆಗೂ 10 ವರ್ಷದೊಳಗಿನ 134 ಮಕ್ಕಳಿಗೆ, 11 ರಿಂದ 19 ವರ್ಷದೊಳಗಿನ 616 ಮಕ್ಕಳಿಗೆ ಕೊರೊನಾ ಸೋಂಕು ತಗುಲಿದೆ. ಒಟ್ಟಾರೆ 19 ವರ್ಷದೊಳಗಿನ 750 ಮಕ್ಕಳು ಸೋಂಕಿತರಾಗಿದ್ದಾರೆ.

**ಶೇ 2 ರಷ್ಟು:** ಮಾರ್ಚ್ ನಲ್ಲಿ ಒಟ್ಟಾರೆ ಸೋಂಕಿತರ 35 ಸಾವಿರ ಇದ್ದು ಈ ಪೈಕಿ 19 ವರ್ಷದೊಳಗಿನ ಪ್ರಮಾಣ ಶೇ 2 ರಷ್ಟಿದೆ.

**07** ಇಷ್ಟು ರಾಜ್ಯಗಳಲ್ಲಿ ಮಕ್ಕಳಿಗೆ ಕೊರೊನಾ ಸಮಸ್ಯೆ

**1,000** ವಿದ್ಯಾರ್ಥಿಗಳಿಗೆ ಸೋಂಕು

(ಮಾ.29ರ ವರೆಗಿನ ಮಾಹಿತಿ)